ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

ಕರ್ನಾಟಕ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಬೆಂಗಳೂರು
ಆರೋಗ್ಯ ಸೌಧ, 1ನೇ ಮಹಡಿ, ಮಾಗಡಿರಸ್ತೆ, ಬೆಂಗಳೂರು-560023

**ಸಂಖ್ಯೆ:ಎನ್‌ಹೆಚ್‌ಎಂ/ಡಿಡಿ/ಐಎಂಎಂ/86/2020-21** **ದಿನಾಂಕ:27.07.2021**

**ಇವರಿಗೆ,**

ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು,
ಜಿಲ್ಲಾಡಳಿತ ಕಛೇರಿ.

**ಮಾನ್ಯರೆ,**

**ವಿಷಯ:** ನೆರೆಹಾವಳಿಗೆ ತುತ್ತಾದ ಜಿಲ್ಲೆಗಳ ಕಾಳಜಿ ಕೇಂದ್ರದ ನಿವಾಸಿಗಳಿಗೆ ಕೋವಿಡ್-19 ಪರೀಕ್ಷೆ / ಲಸಿಕಾಕರಣ ಮತ್ತು ಸಾರ್ವತ್ರಿಕ ಲಸಿಕಾ ಕಾರ್ಯಕ್ರಮ ನಡೆಸುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಕೆಲವು ಜಿಲ್ಲೆಗಳು ನೆರೆಹಾವಳಿಗೆ ತುತ್ತಾಗಿದ್ದು, ಅಂತಹ ಜಿಲ್ಲೆಗಳಲ್ಲಿ ಕಾಳಜಿ ಕೇಂದ್ರಗಳನ್ನು ಸ್ಥಾಪಿಸಿ ಆರೋಗ್ಯ ಸೇವೆಗಳನ್ನು ನೀಡುತ್ತಿರುವುದು ಸರಿಯಷ್ಟೆ. ಈ ಕಾಳಜಿ ಕೇಂದ್ರಗಳಲ್ಲಿ ಕೋವಿಡ್-19 ಸೂಕ್ತ ನಡವಳಿಕೆಯ ಕುರಿತು ಜಾಗೃತಿ ಮೂಡಿಸುವುದು ಮತ್ತು ನಡವಳಿಕೆ ಪಾಲಿಸುವಿಕೆಯ ಅನುಸರಣೆ ಮಾಡುವುದು, ಕೋವಿಡ್-19 ರೋಗಲಕ್ಷಣಗಳನ್ನು ಹೊಂದಿರುವವರಿಗೆ ಕೋವಿಡ್-19 ಪರೀಕ್ಷೆ ಹಾಗೂ ಕಾಳಜಿ ಕೇಂದ್ರಗಳಲ್ಲಿ ದಾಖಲಾಗಿ ಸೇವೆ ಪಡೆಯುತ್ತಿರುವ ಅರ್ಹ ಫಲಾನುಭವಿಗಳಿಗೆ ಭಾರತ ಸರ್ಕಾರದ ಮಾರ್ಗಸೂಚಿಯನ್ವಯ ಕೋವಿಡ್-19 ಲಸಿಕಾಕರಣದ ನಡೆಸಬೇಕಾಗಿರುತ್ತದೆ.

ಕೋವಿಡ್-19 ಲಸಿಕಾಕರಣವನ್ನು ವೈದ್ಯಾಧಿಕಾರಿಗಳ ಉಪಸ್ಥಿತಿ ಮತ್ತು ಮೇಲ್ವಿಚಾರಣೆಯಡಿ ನಡೆಸುವುದು. ತರಬೇತಿ ಹೊಂದಿದ ನುರಿತ ವ್ಯಾಕ್ಸಿನೇಟರ್‌ಗಳು ಲಸಿಕಾಕರಣ ಪ್ರಕ್ರಿಯೆಯನ್ನು ನಿರ್ವಹಿಸುವುದು, ಭಾರತ ಸರ್ಕಾರದ ಮಾರ್ಗಸೂಚಿಯನ್ವಯ ಲಸಿಕಾಕರಣವನ್ನು ನಡೆಸುವುದು ಮತ್ತು ಪ್ರತಿ ಕಾಳಜಿ ಕೇಂದ್ರದಲ್ಲಿ ಲಸಿಕೆಯ ಲಭ್ಯತೆ, ಎಇಎಫ್‌ಐ ಕಿಟ್ ಮತ್ತು ಅನಾಫಲಾಕ್ಸಿಸ್ ಕಿಟ್ ಲಭ್ಯತೆಯನ್ನು ಖಾತರಿಪಡಿಸಿಕೊಳ್ಳುವುದು. ಯಾವುದೇ ಎಇಎಫ್‌ಐ ಪ್ರಕರಣ ಉಂಟಾದಲ್ಲಿ ಅದನ್ನು ಸೂಕ್ತ ರೀತಿಯಲ್ಲಿ ನಿರ್ವಹಿಸುವುದು.

ಮುಂದುವರೆದು, ಜಿಲ್ಲೆಗಳ ಕಾಳಜಿ ಕೇಂದ್ರಗಳಲ್ಲಿನ ಗರ್ಭಿಣಿ ಮಹಿಳೆಯರು ಮತ್ತು ಮಕ್ಕಳಿಗೆ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದ ವೇಳಾಪಟ್ಟಿಯಂತೆ ಲಸಿಕೆಗಳನ್ನು ನೀಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲು ಈ ಮೂಲಕ ಕೋರಲಾಗಿದೆ.

ಅರುಂಧತಿ

ಅಭಿಯಾನ ನಿರ್ದೇಶಕರು
**ರಾಷ್ಟ್ರೀಯ ಆರೋಗ್ಯ ಅಭಿಯಾನ**

**ಸೂಕ್ತ ಕ್ರಮಕ್ಕಾಗಿ:**

1. ಎಲ್ಲಾ ಜಿಲ್ಲೆಯ ಜಿಲ್ಲಾ ಆರೋಗ್ಯ ಮತ್ತ ಕುಟುಂಬ ಕಲ್ಯಾಣ ಅಧಿಕಾರಿಗಳು.
2. ಎಲ್ಲಾ ಜಿಲ್ಲೆಯ ಆರ್.ಸಿ.ಹೆಚ್ ಅಧಿಕಾರಿಗಳು.

**ಮಾಹಿತಿಗಾಗಿ:**

1. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ.
2. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ.
3. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು.
4. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
5. ಅಪರ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.

6. ಯೋಜನಾ ನಿರ್ದೇಶಕರು (ಆರ್.ಸಿ.ಹೆಚ್), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
7. ಉಪ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಬೆಂಗಳೂರು.
8. ಉಪ ನಿರ್ದೇಶಕರು (ಲಸಿಕೆ), ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಬೆಂಗಳೂರು.
9. ಕಛೇರಿ ಪ್ರತಿ.